ದಿನಾಂಕ : DATE: 23/1/21
ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವ ವಾಣಿ

84 ಪುಟಗಳ ಮಧ್ಯಂತರ ವರದಿ ಸಲ್ಲಿಕೆ | ಪೂರ್ಣ ವರದಿ ಸಲ್ಲಿಕೆಗೆ ಇನ್ನಷ್ಟು ಸಮಯ ಕೇಳಿದ ಸಮಿತಿ | ಮರಿತಿಬ್ಬೇಗೌಡರ ನೇತೃತ್ವದ ಸಮಿತಿಯಿಂದ ಸಲ್ಲಿಕೆ

# ಪರಿಷತ್ ಗಲಾಟೆ; ಮಧ್ಯಂತರ ವರದಿ ಸಲ್ಲಿಕೆ

23/1/21

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ವಿಧಾನಪರಿಷತ್‌ನಲ್ಲಿ ಕಳೆದ ತಿಂಗಳು ನಡೆದಿದ್ದ ಗಲಾಟೆಗೆ ಸಂಬಂಧಿಸಿದಂತೆ ವರದಿ ಸಲ್ಲಿಸುವಂತೆ ರಚಿಸಲಾಗಿದ್ದ ಸಮಿತಿ, ಶುಕ್ರವಾರ ಮಧ್ಯಂತರ ವರದಿಯನ್ನು ಸಲ್ಲಿಸಿದ್ದು, ಪೂರ್ಣ ವರದಿ ಸಲ್ಲಿಕೆಗೆ ಇನ್ನಷ್ಟು ಸಮಯ ಕೋರಿದೆ.

ವಿಧಾನಪರಿಷತ್ ಸದಸ್ಯ ಮರಿತಿಬ್ಬೇಗೌಡ ಅವರ ಅಧ್ಯಕ್ಷತೆಯ ಸದನ ಸಮಿತಿ 84 ಪುಟಗಳ ಮಧ್ಯಂತರ ವರದಿಯನ್ನು ವಿಧಾನಪರಿಷತ್ ಸಭಾಪತಿ ಪ್ರತಾಪ್‌ಚಂದ್ರ ಶೆಟ್ಟಿ ಅವರಿಗೆ ಸಲ್ಲಿಸಿತು. ವರದಿ ಸಲ್ಲಿಸಿ ಮಾತನಾಡಿದ ಸದನ ಸಮಿತಿ ಅಧ್ಯಕ್ಷ ಮರಿತಿಬ್ಬೇಗೌಡ ಅವರು ಸಮಿತಿಗೆ 20 ದಿನಗಳ ಕಾಲಾವಕಾಶ ನೀಡಲಾಗಿತ್ತು. ಈವರೆಗೆ ಸಮಿತಿ ಒಟ್ಟು ಐದು ಸಭೆಗಳನ್ನು ನಡೆಸಿದ್ದು, ಹೆಚ್ಚಿನ ಸಮಯವಾಕಾಶ ಬೇಕಾಗಿದೆ. ಆದ್ದರಿಂದ, ಸಮಿತಿಯ ಮೊದಲ ನಾಲ್ಕು ಸಭೆಗಳ ಮಾಹಿತಿಯನ್ನೊಳಗೊಂಡ ವರದಿ ಹಾಗೂ ಸಾಕ್ಷ್ಯಧಾರಗಳನ್ನು ಸಿ.ಡಿ ರೂಪದಲ್ಲಿ ಮಧ್ಯಂತರ ವರದಿಯಲ್ಲಿ ಸಲ್ಲಿಸಲಾಗಿದೆ. ಸಂಪೂರ್ಣ ವರದಿ ಸಲ್ಲಿಸಲು ಇನ್ನೂ ಹೆಚ್ಚಿನ ಸಮಯಾವಕಾಶ ಕೇಳಲಾಗುವುದು ಎಂದು ತಿಳಿಸಿದರು.



ವಿಧಾನಪರಿಷತ್‌ನಲ್ಲಿ ಕಳೆದ ತಿಂಗಳು ನಡೆದಿದ್ದ ಗಲಾಟೆಗೆ ಸಂಬಂಧಿಸಿದಂತೆ ವರದಿ ಸಲ್ಲಿಸುವಂತೆ ರಚಿಸಲಾಗಿದ್ದ ಸಮಿತಿ, ಮಧ್ಯಂತರ ವರದಿಯನ್ನು ಸಮಿತಿಯ ಅಧ್ಯಕ್ಷ ಮರಿತಿಬ್ಬೇಗೌಡ ಅವರು ಸಭಾಪತಿ ಪ್ರತಾಪ್‌ಚಂದ್ರ ಶೆಟ್ಟಿ ಅವರಿಗೆ ಶುಕ್ರವಾರ ಸಲ್ಲಿಸಿದರು. ಈ ವೇಳೆ ಬಿ.ಕೆ.ಹರಿಪ್ರಸಾದ್ ಹಾಗೂ ಆರ್.ಬಿ.ತಿಮ್ಮಾಪುರ ಇದ್ದರು.

**ಘಟನೆ ಕುರಿತು ಮಾಹಿತಿ ಪಡೆಯುವ ಅಗತ್ಯ:** ಗಲಭೆ ಸಮಯದಲ್ಲಿ ಉಪಸ್ಥಿತರಿದ್ದ ವಿಧಾನಪರಿಷತ್ ಕಾರ್ಯದರ್ಶಿ, ಮಾರ್ಷಲ್ಸ್ ಮತ್ತು ವಿಧಾನ ಪರಿಷತ್ ಸದಸ್ಯ ರಮೇಶ್ ಅವರಿಗೆ ನೋಟಿಸ್ ನೀಡಿ ಪ್ರಾಥಮಿಕ ಹೇಳಿಕೆ ಪಡೆಯಲಾಗಿದೆ. ಅಂದಿನ ಅಧಿವೇಶನದಲ್ಲಿ ಹಾಜರಿದ್ದು, ಅಧಿವೇಶನದ ಕಲಾಪಗಳನ್ನು ಚಿತ್ರೀಕರಿಸಿರುವ ಖಾಸಗಿ ಸುದ್ದಿ ವಾಹಿನಿಗಳು, ವಿಧಾನಪರಿಷತ್‌ನ ವೆಬ್‌ಕಾಸ್ಟ್, ಲೋಕೋಪಯೋಗಿ ಇಲಾಖೆ ನಿರ್ವಹಿಸುವ ಸಿಸಿ ಕ್ಯಾಮೆರಾ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಘಟನೆ ಕುರಿತು ಮಾಹಿತಿ ಪಡೆಯುವ ಅಗತ್ಯವಿದೆ ಎಂದು ಸಮಿತಿ ತೀರ್ಮಾನಿಸಿದೆ.

ಘಟನೆಯ ನಂತರ ನಡೆದ ಉಪ ಸಭಾಪತಿ ಧರ್ಮೇಗೌಡ ಅವರ ಸಾವಿನ ಕುರಿತು ಅವರು ಬರೆದಿಟ್ಟಿರುವರು ಎನ್ನಲಾಗಿರುವ ಪತ್ರವನ್ನು ಒದಗಿಸಲು ಗೃಹ ಇಲಾಖೆಯ ಕಾರ್ಯದರ್ಶಿಗಳಿಗೆ ಸಹ ಪತ್ರ ಬರೆಯಲಾಗಿದೆ. ಆದ್ದರಿಂದ, 20 ದಿನಗಳ ಒಳಗಾಗಿ ಪೂರ್ಣ ವರದಿಯನ್ನು ಸಲ್ಲಿಸಲು ಸಾಧ್ಯವಾಗುತ್ತಿಲ್ಲ ಎಂದು ಹೇಳಿದರು.

**ಇತರ ರಾಜ್ಯಗಳಲ್ಲಿ ನಡೆದ ಘಟನೆ ಬಗ್ಗೆ ಮಾಹಿತಿ:** ದೇಶದ ಇತರ ರಾಜ್ಯಗಳಲ್ಲಿ ಸಹ ಇಂತಹ ಘಟನೆಗಳು ನಡೆದಿರುವ ಕುರಿತು ಮಾಹಿತಿಯನ್ನು ಪಡೆಯಲು ಸಮಿತಿ ತೀರ್ಮಾನಿಸಿದ್ದು, ಇನ್ನೂ ಎಷ್ಟು ಸಮಯ ಬೇಕಾಗಬಹುದು ಎನ್ನುವುದರ ಸ್ಪಷ್ಟತೆ ಸಿಕ್ಕ ಮೇಲೆ ಸಭಾಪತಿಗಳಿಗೆ ಪತ್ರ ಬರೆದು, ಹೆಚ್ಚಿನ ಸಮಯಾವಕಾಶವನ್ನು ಲಿಖಿತವಾಗಿ ಕೇಳಲಾಗುವುದು ಎಂದು ತಿಳಿಸಿದರು.

> **ಅಹಿತಕರ ಘಟನೆ ಕುರಿತು ಐದು ಸದಸ್ಯರನ್ನೊಳಗೊಂಡ ಸದನ ಸಮಿತಿಯನ್ನು ಸರಕಾರ ರಚಿಸಿ ಆದೇಶ ಹೊರಡಿಸಿತ್ತು. ಎಚ್.ವಿಶ್ವನಾಥ್ ಮತ್ತು ಸಂಕನೂರು ಅವರು ಖಾಸಗಿ ಕಾರಣಗಳಿಂದ ಸಮಿತಿಗೆ ರಾಜೀನಾಮೆ ನೀಡಿದ್ದು, ಪ್ರಸ್ತುತ ಸಮಿತಿಯಲ್ಲಿ 3 ಸದಸ್ಯರಿದ್ದಾರೆ. ಸಮಿತಿ ಮಧ್ಯಂತರ ವರದಿಯನ್ನು ಸಲ್ಲಿಸಿ ಹೆಚ್ಚಿನ ಸಮಯವನ್ನು ಕೋರಿದೆ. ಸಮಿತಿ ಸಲ್ಲಿಸಿರುವ ಮಧ್ಯಂತರ ವರದಿಯನ್ನು ಪರಿಶೀಲಿಸಿದ ನಂತರ ಮುಂದಿನ ಕ್ರಮದ ಬಗ್ಗೆ ಯೋಚಿಸಲಾಗುವುದು.**
> **- ಪ್ರತಾಪ್‌ಚಂದ್ರ ಶೆಟ್ಟಿ**, ವಿಧಾನಪರಿಷತ್ ಸಭಾಪತಿ